# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 206(1616)

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 11-03-2022

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಕ್ಷೇತ್ರಗಳ ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೆ ಸರ್ಕಾರ ಯಾವ ದಿನಾಂಕದಂದು ಅಧಿಸೂಚನೆ ಹೊರಡಿಸಿದೆ; | ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ದಿನಾಂಕ:13-10-2021ರನ್ವಯ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದೆ. ಅದರಂತೆ ಆಯೋಗವು ಕರ್ತವ್ಯ ನಿರ್ವಹಿಸುತ್ತಿದ್ದು, ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಸೀಮಾ ನಿರ್ಣಯಕ್ಕೆ ಸಂಬಂಧಿಸಿದಂತೆ ತನ್ನದೇ ಆದ ಕಾರ್ಯವಿಧಾನವನ್ನು ರೂಪಿಸಿಕೊಳ್ಳಬೇಕಾಗುತ್ತದೆ.<br>ಆಯೋಗವು ಈಗಾಗಲೇ ಕಾರ್ಯಪ್ರವೃತ್ತವಾಗಿದ್ದು, ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ತಾಲ್ಲೂಕಿನ ಜನಸಂಖ್ಯೆಯ ವಿವರ ಪಡೆಯುವ ಸಲುವಾಗಿ ವಿಡಿಯೋ ಸಂವಾದ ಸಭೆಯನ್ನು ನಡೆಸಿರುತ್ತದೆ ಹಾಗೂ ಜನಸಂಖ್ಯೆಯ ಮಾಹಿತಿಯನ್ನು ಸಂಗ್ರಹಿಸುತ್ತಿದೆ. ಅಲ್ಲದೇ, ಸೀಮಾ ನಿರ್ಣಯ ಪ್ರಕ್ರಿಯೆ ಬಗ್ಗೆ ರಾಜ್ಯ ಚುನಾವಣಾ ಆಯೋಗದ ಅಧಿಕಾರಿಗಳು ಹಾಗೂ ಸಂಬಂಧಿಸಿದ ಇನ್ನಿತರೆ ಅಧಿಕಾರಿಗಳೊಂದಿಗೆ ಸಭೆ ನಡೆಸಿರುತ್ತದೆ. |
| (ಆ) | ಮರು ವಿಂಗಡಣೆ ಮತ್ತು ಮೀಸಲಾತಿ ನಿಗದಿಗೊಳಿಸುವಲ್ಲಿ ಪ್ರಸ್ತುತ ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು) | |
| (ಇ) | ಮರುವಿಂಗಡಣೆ ಕಾರ್ಯ ಯಾವ ಹಂತದಲ್ಲಿದೆ: | |
| (ಈ) | ಜನಪ್ರತಿನಿಧಿಗಳು ಇಲ್ಲದಿರುವುದರಿಂದ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಹಾಗು ಜನಸಾಮಾನ್ಯರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 321ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 26-04-2021 ಹಾಗೂ ತಿದ್ದುಪಡಿ ಆದೇಶ ದಿನಾಂಕ: 28-04-2021ರಲ್ಲಿ ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು |

| | | |
|---|---|---|
| | | ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 239ರನ್ವಯ ರಾಜ್ಯದ ಜಿಲ್ಲಾ ಪಂಚಾಯತಿ ಹಾಗು ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಸದರಿ ಆಡಳಿತಾಧಿಕಾರಿಗಳು ಪ್ರಕರಣ 239(2)ರನ್ವಯ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಯ ಹಾಗೂ ಸಂಬಂಧಪಟ್ಟ ಅಧ್ಯಕ್ಷರುಗಳು ನಿರ್ವಹಿಸಬೇಕಾದ ಎಲ್ಲಾ ಅಧಿಕಾರಗಳು ಮತ್ತು ಕರ್ತವ್ಯಗಳನ್ನು ನೆರವೇರಿಸಲು ಅಧಿಕಾರ ಹೊಂದಿರುತ್ತಾರೆ. ಆಡಳಿತಾಧಿಕಾರಿಗಳ ಅವಧಿಯನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 212 ಜಿಪಸ 2021 ದಿನಾಂಕ: 29-10-2021ರಲ್ಲಿ ಮತ್ತೆ ಮುಂದಿನ 6 ತಿಂಗಳು ಅಥವಾ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಯುವವರೆಗೆ ವಿಸ್ತರಿಸಲಾಗಿರುತ್ತದೆ.<br>ರಾಜ್ಯದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಿರುವುದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗಿರುವುದಿಲ್ಲ. |
| (ಉ) | ಯಾವ ಕಾಲಮಿತಿಯಲ್ಲಿ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿಗಳಿಗೆ ಚುನಾವಣೆ ನಡೆಸಲಾಗುವುದು? | ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ನಿಯಮಾನುಸಾರ ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿಯನ್ನು ಸಲ್ಲಿಸಿದ ನಂತರ ಪರಿಶೀಲಿಸಿ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಗ್ರಾಅಪಂರಾ 117 ಜಿಪಸ 2022**

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.